ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ಸಿ. ಆ. ಸು. ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE: 5/11/20

# ಸರ್ಕಾರಿ ನೌಕರರಿಗೆ ಗುರುತಿನ ಚೀಟಿ ಧರಿಸುವುದು ಕಡ್ಡಾಯ

ಬೆಂಗಳೂರು: ಇನ್ನು ಮುಂದೆ ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಕರ್ತವ್ಯದ ಅವಧಿಯಲ್ಲಿ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ತಮ್ಮ ಇಲಾಖೆಯಿಂದ ಪಡೆದ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಕೊರಳಿಗೆ ಧರಿಸಿ, ಪ್ರದರ್ಶಿಸಬೇಕು ಎಂದು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಅಲ್ಲದೆ, ಅಧಿಕಾರಿಗಳು ಮತ್ತು ಸಿಬ್ಬಂದಿ ತಾವು ಕುಳಿತು ಕರ್ತವ್ಯ ನಿರ್ವಹಿಸುವ ಮೇಜಿನ ಮೇಲೆ ತಮ್ಮ ಹೆಸರು ಮತ್ತು ಹುದ್ದೆ ಸೂಚಿಸುವ ನಾಮಫಲಕವನ್ನು ಕೂಡಾ ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು ಎಂದೂ ಆದೇಶದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಡಿಪಿಎಆರ್) ಸೂಚಿಸಿದೆ.

ಈ ಆದೇಶವನ್ನು ಪಾಲಿಸುವಂತೆ ಎಲ್ಲ ಇಲಾಖೆಗಳ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು ತಮ್ಮ ಅಧೀನ ಕಾರ್ಯದರ್ಶಿಗಳಿಗೆ ಹಾಗೂ ನಿಗಮ- ಮಂಡಳಿಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚಿಸಬೇಕು ಎಂದೂ ತಿಳಿಸಲಾಗಿದೆ.

ಈ ವ್ಯವಸ್ಥೆ ಅಳವಡಿಸೊಂಡರೆ ಸಾರ್ವಜನಿಕರು ತಮ್ಮ ಕಾರ್ಯಗಳಿಗೆ ಸಂಬಂಧಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ನೇರವಾಗಿ ಭೇಟಿಯಾಗಲು ಅನುಕೂಲ ಆಗಲಿದೆ. ಅಲ್ಲದೆ, ಕರ್ತವ್ಯದಲ್ಲಿ ಪಾರದರ್ಶಕತೆ ತರಲು ಈ ಕ್ರಮ ಅಗತ್ಯವಾಗಿದೆ. ಬ್ಯಾಂಕುಗಳು ಮತ್ತು ಅಂಚೆ ಕಚೇರಿಗಳಲ್ಲಿ ಈಗಾಗಲೇ ಈ ವ್ಯವಸ್ಥೆ ಇದೆ' ಎಂದೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ತಿಳಿಸಿದೆ.